Joint Director Building Licence Cell (North)
N.R. Square
Bengaluru 560 002
No. 76
Date. 07-02-20
BBMP

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಜಂಟಿ ನಿರ್ದೇಶಕರು (ಕಟ್ಟಡ ಪರವಾನಗಿ ಕೋಶ– ಉತ್ತರ) ರವರ ಕಛೇರಿ, ಎನ್.ಆರ್.ಚೌಕ, ಬೆಂಗಳೂರು – 560 002

ಸಂಖ್ಯೆ: BBMP/Addl.Dir/JD NORTH/ LP/0072/2018-19 ದಿನಾಂಕ: 04-02-2020

07-02-20

## ಪ್ರಾರಂಭಿಕ ಪ್ರಮಾಣಪತ್ರ

ವಿಷಯ: ಆಸ್ತಿ ಖಾತಾ ಸಂಖ್ಯೆ. 2846/100/3, ವಾರ್ಡ್ ಸಂಖ್ಯೆ: 06, ರಾಚೇನಹಳ್ಳಿ ಗ್ರಾಮ, ಕೆ.ಆರ್.ಪುರಂ ಹೋಬಳಿ, ಬೆಂಗಳೂರು ಪೂರ್ವ ತಾಲ್ಲೂಕು, ಥಣೀಸಂದ್ರ, ಯಲಹಂಕ ವಲಯ, ಬೆಂಗಳೂರು ಇಲ್ಲಿ ನಿರ್ಮಿಸುತ್ತಿರುವ ವಸತಿ ಸಮುಚ್ಚಯ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರ ನೀಡುವ ಬಗ್ಗೆ.

ಉಲ್ಲೇಖ: 1) ನಕ್ಷೆ ಮಂಜೂರಾತಿ ಸಂಖ್ಯೆ: BBMP/Addl.Dir/JD NORTH/ LP/0072/2018-19 ದಿನಾಂಕ: 11-10-2019.

2) ತಮ್ಮ ಮನವಿ ಪತ್ರ ದಿನಾಂಕ: 23-12-2019.

* * * * * * *

ಆಸ್ತಿ ಖಾತಾ ಸಂಖ್ಯೆ: 2846/100/3, ವಾರ್ಡ್ ಸಂಖ್ಯೆ: 06, ರಾಚೇನಹಳ್ಳಿ ಗ್ರಾಮ, ಕೆ.ಆರ್.ಪುರಂ ಹೋಬಳಿ, ಬೆಂಗಳೂರು ಪೂರ್ವ ತಾಲ್ಲೂಕು, ಥಣೀಸಂದ್ರ, ಯಲಹಂಕ ವಲಯ, ಬೆಂಗಳೂರು ಇಲ್ಲಿ ತಳ + ನೆಲ + ಮೇಲಿನ 12 ಅಂತಸ್ತುಗಳ 21 ಘಟಕಗಳುಳ್ಳ ವಸತಿ ಸಮುಚ್ಚಯ ಕಟ್ಟಡ ನಿರ್ಮಿಸಲು ಈ ಕಛೇರಿಯಿಂದ ಸಂಖ್ಯೆ: BBMP/Addl.Dir/JD North/LP/0072/2018-19 ರಂತೆ ದಿನಾಂಕ: 11-10-2019 ರಂದು ನಕ್ಷೆ ಮಂಜೂರಾತಿಯನ್ನು ನೀಡಲಾಗಿರುತ್ತದೆ. ಪ್ರಸ್ತುತ ವಸತಿ ಸಮುಚ್ಚಯ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರ ನೀಡಲು ಉಲ್ಲೇಖ (2) ರಲ್ಲಿ ಕೋರಿರುವುದಕ್ಕೆ ಸಂಬಂಧಿಸಿದಂತೆ ಸದರಿ ಕಟ್ಟಡ ನಿರ್ಮಾಣದ ಸ್ಥಳವನ್ನು ಪರಿಶೀಲಿಸಲಾಗಿ, ಮಂಜೂರಾತಿ ನಕ್ಷೆಯನ್ವಯ ನಡುಜಾಗಗಳನ್ನು ಬಿಟ್ಟು ಕಟ್ಟಡದ ನಿರ್ಮಾಣ ಮಾಡುತ್ತಿರುವುದನ್ನು ಗಮನಿಸಲಾಗಿರುತ್ತದೆ.

ಅಪರ ನಿರ್ದೇಶಕರು (ನಗರ ಯೋಜನೆ) ರವರು ಪ್ರಾರಂಭಿಕ ಪ್ರಮಾಣಪತ್ರ ನೀಡುವ ಪ್ರಸ್ತಾವನೆಗೆ ದಿನಾಂಕ: 06-01-2020 ರಂದು ಅನುಮೋದನೆ ನೀಡಿರುತ್ತಾರೆ. ಸದರಿ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರದ ಸಂಬಂಧ ಶುಲ್ಕ ರೂ. 24,000/- ಗಳಿಗೆ ಡಿ.ಡಿಯನ್ನು ಸಲ್ಲಿಸಿ ಈ ಕಛೇರಿಯ ರಶೀದಿ ಸಂಖ್ಯೆ: RE-ifms 331-TP/000567, ದಿನಾಂಕ: 03-02-2020 ರಂದು ಸಂದಾಯ ಮಾಡಿರುವುದರಿಂದ, ವಸತಿ ಸಮುಚ್ಚಯ ಕಟ್ಟಡಕ್ಕೆ ಈ ಕೆಳಕಂಡ ಷರತ್ತುಗಳಿಗೆ ಒಳಪಡಿಸಿ ಪ್ರಾರಂಭಿಕ ಪ್ರಮಾಣಪತ್ರವನ್ನು ನೀಡಲಾಗಿದೆ.

**ಷರತ್ತುಗಳು**

1) ಕಟ್ಟಡದ ಕಾಮಗಾರಿಯನ್ನು ಮಂಜೂರಾತಿ ನಕ್ಷೆಯಂತೆ ನಿಯಮಾನುಸಾರ ನಿರ್ಮಿಸತಕ್ಕದ್ದು.
2) ಕಟ್ಟಡ ನಿರ್ಮಾಣದ ಸ್ಥಳದಲ್ಲಿ ಅಕ್ಕ-ಪಕ್ಕದವರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ, ವಾಹನ ಸಂಚಾರಕ್ಕೆ ಅಡಚಣೆಯಾಗದಂತೆ, ಯಾವುದೇ ಅಪಘಾತ ಆಗದಂತೆ ಕಟ್ಟಡ ನಿರ್ಮಾಣ ಕೈಗೊಳ್ಳುವುದು ಹಾಗೂ ಕೆಲಸಗಾರರಿಗಾಗಿ ಶೆಡ್ ಮತ್ತು ತಾತ್ಕಾಲಿಕ ಶೌಚಾಲಯಗಳನ್ನು ನಿರ್ಮಿಸತಕ್ಕದ್ದು.
3) ನಕ್ಷೆ ಮಂಜೂರಾತಿಯ ಸಿಂಧುತ್ವವು ಉಲ್ಲೇಖ (1) ರಂತೆ ಅನುಮೋದನೆ ನೀಡಿದ ದಿನಾಂಕದಿಂದ 5 ವರ್ಷಗಳ ಅವಧಿಗೆ ಮಾನ್ಯತೆ ಹೊಂದಿದ್ದು, ಈ ಅವಧಿಯೊಳಗೆ ನಿರ್ಮಾಣ ಕಾರ್ಯವನ್ನು ಪೂರ್ಣಗೊಳಿಸಿ ಸ್ವಾಧೀನಾನುಭವ ಪ್ರಮಾಣಪತ್ರವನ್ನು ಪಡೆಯತಕ್ಕದ್ದು.
4) ಕಟ್ಟಡ ನಿರ್ಮಾಣದ ಪ್ರಗತಿಯನ್ನು ಕಾಲಾನುಸಾರ ಸಂಬಂಧಪಟ್ಟ ಇಂಜಿನಿಯರಿಂಗ್ ಉಪ-ವಿಭಾಗಕ್ಕೆ ಮಾಹಿತಿಯನ್ನು ನೀಡಿ ಮಂಜೂರಾತಿ ನಕ್ಷೆಯಂತೆ ನಿರ್ಮಿಸುತ್ತಿರುವ ಬಗ್ಗೆ ಪರಿವೀಕ್ಷಣೆಗೆ ಒಳಪಡಿಸತಕ್ಕದ್ದು.

5) ನಿವೇಶನದ ಖಾತಾ ವಿಭಜನೆ, ದಾಖಲಾತಿಗಳನ್ನು / ಸ್ವತ್ತಿನ ಹಕ್ಕನ್ನು ಬದಲಾಯಿಸಿದಲ್ಲಿ ಮತ್ತು ಯಾವುದೇ ರೀತಿ ದಾಖಲಾತಿಗಳನ್ನು ಅಥವಾ ವಾಸ್ತವಾಂಶ ಮರೆಮಾಚಿದಲ್ಲಿ ಅರ್ಜಿದಾರರು ನೇರ ಹೊಣೆಯಾಗಿರುತ್ತಾರೆ ಮತ್ತು ನೀಡಲಾದ ಕಟ್ಟಡ ನಕ್ಷೆ ಮಂಜೂರಾತಿಯು ತನ್ನಿಂದತಾನೇ ರದ್ದುಗೊಳ್ಳುತ್ತದೆ.

6) ವಿವಿಧ ಇಲಾಖೆಗಳಿಂದ ಪಡೆದಿರುವ ನಿರಾಕ್ಷೇಪಣಾ ಪತ್ರಗಳಲ್ಲಿ ವಿಧಿಸಿರುವ ಷರತ್ತುಗಳನ್ನು ಪಾಲಿಸತಕ್ಕದ್ದು

7) ಅರ್ಜಿದಾರರು/ಮಾಲೀಕರು/ಡೆವಲಪರ್‌ಗಳು ಕಟ್ಟಡ ನಿರ್ಮಾಣ ಮತ್ತು ಕಟ್ಟಡ ತೆರವಿನ ತ್ಯಾಜ್ಯದ ನಿರ್ವಹಣೆ ಮತ್ತು ವಿಲೇವಾರಿಯನ್ನು ಮಾಡಲು ಘನತ್ಯಾಜ್ಯ ನಿರ್ವಹಣೆ (ಎಸ್.ಡಬ್ಲ್ಯೂ.ಎಂ) ಉಪನಿಯಮ 2016 ಕ್ಕೆ ಬದ್ಧವಾಗಿರತಕ್ಕದ್ದು.

8) ಅರ್ಜಿದಾರರು/ಮಾಲೀಕರು/ಡೆವಲಪರ್‌ಗಳು ವಿದ್ಯುತ್ ಚಾಲಿತ ವಾಹನಗಳ ಚಾರ್ಜಿಂಗ್ ಪಾಯಿಂಟ್‌ಗಳನ್ನು ಅಳವಡಿಸಲು ಅಗತ್ಯ ಕ್ರಮವಹಿಸುವುದು.

9) ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯಿಂದ ಸಂಸ್ಕರಿಸಿದ (Treated Water Utilisation for Construction) ನೀರನ್ನು ಕಟ್ಟಡ ನಿರ್ಮಾಣ ಕಾರ್ಯಕ್ಕೆ ಕಡ್ಡಾಯವಾಗಿ ಬಳಸಿಕೊಳ್ಳುವುದು.

10) ಅರ್ಜಿದಾರರು/ಮಾಲೀಕರು/ಡೆವಲಪರ್‌ಗಳು ಪ್ರತಿ 240.00 ಚ.ಮೀ ಅನುಪಾತ ವಿಸ್ತೀರ್ಣಕ್ಕೆ ಒಂದರಂತೆ ಗಿಡವನ್ನು ನೆಡುವುದು.

06/02/2020

ಜಂಟಿ ನಿರ್ದೇಶಕರು (ಕಟ್ಟಡ ಪರವಾನಗಿ ಕೋಶ – ಉತ್ತರ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

04/02/2020 04/02/2020 04/02/2020

ಗೆ,

ಮೆ॥ ಕ್ವಾಂಟಸ್ ಅರ್ಬನ್‌ಸ್ಕೇಪ್ಸ್ ಎಲ್‌ಎಲ್‌ಪಿ ರವರ
ಪಾಲುದಾರರಾದ ಶ್ರೀ.ನಯಾಜ್ ಅಹಮದ್,
# 1212/5-1, 35ನೇ ಬ್ಲಾಕ್,
4ನೇ 'ಟಿ' ಬ್ಲಾಕ್ ಜಯನಗರ,
ಬೆಂಗಳೂರು- 560041.